ಕಾರ್ಕಳ ತಾಲ್ಲೂಕಿನಲ್ಲಿ ಆಸ್ಪತ್ರೆ ಕಟ್ಟಡ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 213(611)

ಸದಸ್ಯರ ಹೆಸರು: ಶ್ರೀ ಗೋಪಾಲ ಭಂಡಾರಿ ಹೆಚ್.(ಕಾರ್ಕಳ)

ಉತ್ತರಿಸುವ ಸಚಿವರು: ಡಾ||.ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಪ್ರಶ್ನೆ

ಅ. ಕಾರ್ಕಳ ತಾಲ್ಲೂಕಿನ ಆಸ್ಪತ್ರೆಯ ಕಟ್ಟಡದ ಕಾಮಗಾರಿ ಯಾವ ಹಂತದಲ್ಲಿದೆ?

ಆ. ಈ ಕಾಮಗಾರಿಯನ್ನು ಪೂರ್ಣಗೊಳಿಸಲು ನಿಗದಿಪಡಿಸಿದ್ದ ಅವಧಿಯೇನು; ಅದನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಇ ಈ ಕಾಮಗಾರಿಗೆ ನಿಗದಿಪಡಿಸಿದ ಅಂದಾಜು ಮೊತ್ತವೆಷ್ಟು; ಅದರಲ್ಲಿ ಈವರೆಗೆ ಖರ್ಚು ಮಾಡಲಾದ ಮೊತ್ತವೆಷ್ಟು; ಎಷ್ಟು ಬಿಡುಗಡೆ ಮಾಡಲಾಗಿದೆ?

ಉತ್ತರ

ಅ. ಕಾರ್ಕಳ ತಾಲ್ಲೂಕು ಆಸ್ಪತ್ರೆಯನ್ನು 100 ಹಾಸಿಗೆಗಳ ಆಸ್ಪತ್ರೆಯಾಗಿ ವಿಸ್ತರಿಸಲಾಗುತ್ತಿದ್ದು ಕಾಮಗಾರಿ ಪ್ರಗತಿಯಲ್ಲಿದೆ. ಶಸ್ತ್ರಚಿಕಿತ್ಸಾ ಕೊಠಡಿ, ವಾರ್ಡ್‌ಗಳ ಕಟ್ಟಡ ಕಾಮಗಾರಿ ಮುಗಿದಿದ್ದು, ನವೀಕರಣ ಕಾಮಗಾರಿ ನಡೆಯುತ್ತಿದೆ.

ಆ. ಈ ಆಸ್ಪತ್ರೆ ಕಾಮಗಾರಿಯನ್ನು ದಿನಾಂಕ:7.12.98ರಂದು ಪ್ರಾರಂಭಿಸಿದ್ದು, ಪೂರ್ಣಗೊಳಿಸಲು ನಿಗದಿಪಡಿಸಿದ 18 ತಿಂಗಳ ಅವಧಿಯಲ್ಲಿ ಅಂದರೆ ದಿನಾಂಕ: 6.6.2002ಕ್ಕೆ ಮುಗಿಸಬೇಕಾಗಿದ್ದು, ಗುತ್ತಿಗೆದಾರರ ಮಂದಗತಿಯ ಕಾಮಗಾರಿಯಿಂದ ವಿಳಂಬವಾಗಿದೆ. ಈ ಬಗ್ಗೆ ಗುತ್ತಿಗೆದಾರರಿಗೆ ನೋಟಿಸ್ ನೀಡಲಾಗಿದ್ದು, ಸದರಿಯವರು ದಿನಾಂಕ: 31.3.2002ರವರೆಗೆ ಕಾಲಾವಕಾಶ ಕೋರಿರುತ್ತಾರೆ. ಗುತ್ತಿಗೆ ಕರಾರಿನನ್ವಯ ನಿಧಾನ ಕಾಮಗಾರಿಗೆ ದಂಡ ವಿಧಿಸಲು ಹಾಗೂ ಕಾಮಗಾರಿಗಳನ್ನು ದಿನಾಂಕ: 31.3.2002ರೊಳಗೆ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ.

ಇ. ಈ ಕಾಮಗಾರಿಗಳ ಅಂದಾಜು ಮೊತ್ತವು ರೂ.169.00 ಲಕ್ಷಗಳಾಗಿದ್ದು ಇದುವರೆವಿಗೆ ರೂ.91.32 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.